**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಲಯ ,**
**ಶ್ರೀರಂಗಪಟ್ಟಣ**

**ಸಿ.ಸಿ.404/2016**

| | |
|---|---|
| ಸಿ.ಡಬ್ಲ್ಯೂ : | 9 |
| ಪಿ.ಡಬ್ಲ್ಯೂ : | 6 |

| | | |
|---|---|---|
| ಸಾಕ್ಷಿದಾರರ ಹೆಸರು | : | ಹೇಮಂತ್ ಕುಮಾರ್ |
| ತಂದೆ/ ಪತಿಯ ಹೆಸರು | : | ದಾಸಶೆಟ್ಟಿ |
| ವಯಸ್ಸು | : | 52 ವರ್ಷ |
| ವೃತ್ತಿ | : | ಎ.ಎಸ್.ಐ , ಶ್ರೀರಂಗಪಟ್ಟಣ ಗ್ರಾಮಾಂತರ ಪೊಲೀಸ್ ಠಾಣೆ |
| ವಾಸ | : | ಶ್ರೀರಂಗಪಟ್ಟಣ |

**ಸಾಕ್ಷಿಗೆ ಪ್ರಮಾಣ ವಚನ ಮಾಡಿಸಿದ ದಿನಾಂಕ: 08.12.2025**

**ಮುಖ್ಯ ವಿಚಾರಣೆ: ಮಾನ್ಯ ಎ ಪಿ ಪಿ ರವರಿಂದ**

ನಾನು 2015 ನೇ ಇಸವಿಯಿಂದ 2022 ನೇ ಇಸವಿಯವರೆಗೆ ರಿಂದ ಅರಕೆರೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಿ:03.02.2016 ರಂದು ಬೆಳಗಿನ ಜಾವ ಶ್ರೀರಂಗಪಟ್ಟಣದ ಸರ್ಕಾರಿ ಆಸ್ಪತ್ರೆಗೆ ಬೇಟಿ ನೀಡಿ ಅಲ್ಲಿ ಚಾಸಾ.1 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ.

ಸಿ.ಸಿ.545/2015 ರಲ್ಲಿ ಸದರಿ ಚಾಸಾ.1 ರವರ ವಿರುದ್ದ ದಸ್ತಗಿರಿ ವಾರಂಟ್ ಇದ್ದು ಸದರಿ ದಸ್ತಗಿರಿ ವಾರಂಟ್ ನಂತೆ ಚಾಸಾ.1 ರವರನ್ನು ನನ್ನ ವಶಕ್ಕೆ ಪಡೆದುಕೊಂಡು ದಸ್ತಗಿರಿ ಮಾಡಿ ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ. ನಂತರ ಮಾನ್ಯ ನ್ಯಾಯಾಲಯದ ಆದೇಶದಂತೆ ಚಾಸಾ.1 ರವರನ್ನು ಕಾರಗೃಹದ ವಶಕ್ಕೆ ಒಪ್ಪಿಸಿರುತ್ತೇನೆ. ನಂತರ ಬೆಳಗ್ಗೆ 5.30 ಗಂಟೆಗೆ ಅರಕೆರೆ ಪೊಲೀಸ್ ಠಾಣೆಗೆ ಹೋಗಿ

ಠಾಣಾ ಎಸ್.ಹೆಚ್.ಒ ರವರಿಗೆ ಚಾಸಾ.1 ರವರ ಹೇಳಿಕೆಯನ್ನು ಹಾಜರು ಪಡಿಸಿರುತ್ತೇನೆ.

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ</u>

ಸಿ.ಸಿ.545/2015 ರಲ್ಲಿ ತಿಮ್ಮೇಗೌಡರವರು ದೂರನ್ನು ನೀಡಿರುತ್ತಾರೆ ಎಂದರೆ ಸಾಕ್ಷಿಯು ನನಗೆ ಮಾಹಿತಿ ಇಲ್ಲ ಎಂದು ನುಡಿಯುತ್ತಾರೆ.

ಚಾಸಾ.1 ರವರ ಹೇಳಿಕೆಯನ್ನು ಪಡೆದುಕೊಳ್ಳುವ ಸಮಯದಲ್ಲಿ ಯಾರು ಯಾರು ಇದ್ದರು ಎನ್ನುವ ಪ್ರಶ್ನೆಗೆ ಸಾಕ್ಷಿಯು ವೈದ್ಯರು ಇದ್ದರು ಎಂದು ನುಡಿಯುತ್ತಾರೆ. ಆರೋಪಿಯ ಸುಸ್ಥಿತಿಯ ಬಗ್ಗೆ ವೈದ್ಯರ ಬಳಿ ಲಿಖಿತ ಪತ್ರವನ್ನು ನೀಡಿರುತ್ತೀರಾ ಎನ್ನುವ ಪ್ರಶ್ನೆಗೆ ಸಾಕ್ಷಿಯು ಮೌಖಿಕವಾಗಿ ಕೇಳಿರುತ್ತೇನೆ ಎಂದು ನುಡಿಯುತ್ತಾರೆ. ಚಾಸಾ.1 ರವರ ಹೇಳಿಕೆಯ ಪಡೆದ ನಂತರ ನಾನು ವೈದ್ಯರ ಸಹಿ ಪಡೆದುಕೊಂಡಿರುತ್ತೇನೆ.

ಚಾಸಾ.1 ಮತ್ತು ಆರೋಪಿ ನಡುವೆ ವೈಮನಸ್ಸು ಇರುವ ಕಾರಣ ನಾನು ಚಾಸಾ.1 ರವರ ಹೇಳಿಕೆಯನ್ನು ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ಹೇಳಿಕೆಯಲ್ಲಿ ತಿಳಿಸಿರುವಂತೆ ಆರೋಪಿ ಯಾವುದೇ ತಪ್ಪು ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಚಾಸಾ.1 ರವರ ಜೊತೆ ಶರೀಕಾಗಿ ಅವರ ಹೇಳಿಕೆಯನ್ನು ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಸಾ.ಓ.ಹೇ.ಸ.ಒ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆಎಂಎಫ್‌ಸಿ., ಶ್ರೀರಂಗಪಟ್ಟಣ.